530

ನೆಂದೀದುರ್ಗದ ಡಿವಿಜ್ಞ ಡಿಸ್ಟ್ರಿಕ್ಟ್ ಜಡ್ಜಿಯವರ ಕೋರ್ಟಿನಲ್ಲಿ.

ಸ್ಞ 1896—97ನೇ ಇಸವಿ ಮಿ|| ಅರ್ಜೀ ನಂಬರ 138.

ಮೃತಪಟ್ಟ ವಕ್ಕಲಿಗರ ಪುಟ್ಟಪ್ಪನವರ ಆಸ್ತೀ ವಿಷಯದಲ್ಲಿ—

ಅರ್ಜೀದಾರು ಬೆಂಗಳೂರು ತಾಲ್ಲೂಕು ಆಗರದ ಹೋಬಳಿ ಆವಲಹಳ್ಳಿಯಲ್ಲಿ ಇರುವ ನಂಜುಂಡಪ್ಪನು ಮೃತಪಟ್ಟ ಸದರೀ ಪುಟ್ಟಪ್ಪನವರಿಗೆ ಮಗನು ಆಗಬೇಕೆಂಬ ಹಕ್ಕುದಾರಿ ಮೇಲೆ ಬೆಂಗಳೂರು ತಾಲ್ಲೂಕು ಆವಲಹಳ್ಳಿ ಸ್ಥಳದ ನಂಜುಂಡಪ್ಪನವರು ಆವಲಹಳ್ಳಿ ವಾಸಸ್ಥರಾಗಿ ಮೃತಪಟ್ಟ ಪುಟ್ಟಪ್ಪನವರ ಜಿಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ ಸ್ಞ 1860ನೇ ಇಸವಿ 27ನೇ ಆಕ್ಟ್ಸ ಮೇರಿಗೆ ಸರಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ನಂಜುಂಡಪ್ಪನವರ ಅರ್ಜಿಯನ್ನು ಸ್ಞ 1896ನೇ ಇಸವಿ ನವಂಬರ್ ತಿಂಗಳ ತಾರೀಖು 26ರಲ್ಲು ಕೇಳಿ ಸರಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ಪುಟ್ಟಪ್ಪನವರ ಆಸ್ತಿಗೆ ಹಕ್ಕುದಾರರಾದ ವಿಶಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

ಸ್ಞ 1896—97ನೇ ಇಸವಿ ಅರ್ಜೀ ನಂಬರ 140.

ಮೃತಪಟ್ಟ ಪುಟ್ಟಂಣನವರ ಆಸ್ತೀ ವಿಷಯದಲ್ಲಿ—

ಅರ್ಜೀದಾರು ಮಾಗಡಿ ತಾಲ್ಲೂಕು ಮಾಗಡಿ ಕಸಬೆಯಲ್ಲಿರುವ ಕುರವಿನ 1ನೇ ಭೈರಂಣ 2ನೇ ಚನ್ನಮ್ಮ. ಮೃತಪಟ್ಟ ಸದರೀ ಪುಟ್ಟಂಣನವರಿಗೆ 1ನೇ ಅರ್ಜೀದಾರ ಚಿಕ್ಕಪ್ಪ 2ನೇ ಅರ್ಜೀದಾರಳು ಹೆಂಡತಿ ಆಗಬೇಕೆಂಬ ಹಕ್ಕುದಾರಿ ಮೇಲೆ ಮಾಗಡಿ ಕಸಬಾ ಸ್ಥಳದ 1ನೇ ಭೈರಂಣ 2ನೇ ಚನ್ನಮ್ಮ ಮಾಗಡಿ ವಾಸಸ್ಥರಾಗಿ ಮೃತಪಟ್ಟ ಪುಟ್ಟಂಣನವರ ಜಿಂದಗಿ ಬಗ್ಯಾಗಿ ಬರತಕ್ಕ ಸಾಲವನ್ನ ವಸೂಲ್ ಮಾಡುವದಕ್ಕೆ ಸ್ಞ 1860ನೇ ಇಸವಿ 27ನೇ ಆಕ್ಟ್ಸ ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಭೈರಂಣ, ಚನ್ನಮ್ಮನವರ ಅರ್ಜಿಯನ್ನು 1896ನೇ ಇಸವಿ ನವಂಬರು ತಿಂಗಳ ತಾರೀಖು 26ರಲ್ಲು ಕೇಳಿ ಸರ್ಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲಲ್ಲಿ ಸದರೀ ಮೃತಪಟ್ಟ ಪುಟ್ಟಂಣನವರ ಆಸ್ತಿಗೆ ಹಕ್ಕುದಾರರಾದ ವಿಶಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

ಸ್ಞ 1896—97ನೇ ಇಸವಿ ಮಿ|| ಅರ್ಜೀ ನಂಬರ 142.

ಮೃತಪಟ್ಟ ವರದಪ್ಪನವರ ಆಸ್ತೀ ವಿಷಯದಲ್ಲಿ—

ಅರ್ಜೀದಾರು ನೆಲವಂಗಲದ ತಾಲ್ಲೂಕು ಸೊಂಪೆಕುಪ್ಪಪ್ಪ ಹೋಬಳಿ ಗುಂಡಮಗೆರೆಯಲ್ಲಿರುವ ಬೈಯ್ಯಮ್ಮನು ಮೃತಪಟ್ಟ ಸದರೀ ವರದಪ್ಪನವರಿಗೆ ಹೆಂಡತಿ ಆಗಬೇಕೆಂಬ ಹಕ್ಕುದಾರಿ ಮೇಲೆ ನೆಲವಂಗಲ ತಾಲ್ಲೂಕು ಗುಂಡಮಗೆರೆ ಸ್ಥಳದ ಬೈಯ್ಯಮ್ಮನವರು ಗುಂಡಮಗೆರೆ ವಾಸಸ್ಥರಾಗಿ ಮೃತಪಟ್ಟ ವರದಪ್ಪನವರ ಜಿಂದಗಿ ಬಗ್ಯಾಗಿ ಬರತಕ್ಕ ಸಾಲವನ್ನು ವಸೂಲ್ ಮಾಡುವದಕ್ಕೆ ಸ್ಞ 1860ನೇ ಇಸವಿ 27ನೇ ಆಕ್ಟ್ಸ ಮೇರಿಗೆ ಸರ್ಟಿಫಿಕೇಟ್ ಬಗ್ಯೆ ಈ ಕೋರ್ಟಿಗೆ ಖಾಯಿಷ್ ಮಾಡಿರುತ್ತಾರೆ.

ಸದರೀ ದರಖಾಸ್ತುದಾರರಾದ ಬೈಯ್ಯಮ್ಮನವರ ಅರ್ಜಿಯನ್ನು ಸ್ಞ 1896ನೇ ಇಸವಿ ನವಂಬರ್ ತಿಂಗಳ ತಾರೀಖು 26ರಲ್ಲು ಕೇಳಿ ಸರ್ಟಿಫಿಕೇಟ್ ಪಡೆಯತಕ್ಕ ಬಾಧ್ಯತೆಯು ವಿಮರ್ಶೆ ಮಾಡಲ್ಪಡುತ್ತೆ. ಆ ಕಾಲದಲ್ಲಿ ಸದರೀ ಮೃತಪಟ್ಟ ವರದಪ್ಪನವರ ಆಸ್ತಿಗೆ ಹಕ್ಕುದಾರರಾದ ವಿಶಿಷ್ಟರೂ ಈ ಕೋರ್ಟಿನಲ್ಲಿ ಹಾಜರ್ ಇರಬೇಕೆಂದು ಇದರಿಂದ ತಿಳಿಯಪಡಿಸಿ ಇದೆ.

ಸ್ಞ 1896ನೇ ಇಸವಿ ಅಕ್ಟೋಬರ್ ತಿಂಗಳ 28ನೇ ತಾರೀಖಿನಲ್ಲಿ ಕೋರ್ಟು ಮೊಹರ್ ನಿಶಿ ನಮ್ಮ ದಸ್ತಖತ್ತೊಡನೆ ಕೊಡೋಣಾಗಿದೆ.

ಸಿ. ಕ್ರಸ್,
ಡಿಸ್ಟ್ರಿಕ್ಟ್ ಜಡ್ಜ.

ಫಾರೆಸ್ಟ್ ಇಲಾಖಾ.

ನೋ ಟಿ ಸ್.

ತಾರೀಖು 2ನೇ ಸಪ್ಟಂಬರ್ 1896ನೇ ಇಸವಿ.

ಇದರಿಂದ ಸಮಸ್ತ ಜನಗಳಿಗೂ ತಿಳಿಯಪಡಿಸುವದೇನಂದರೆ,—ಮೈಸೂರು ದೇಶದಲ್ಲಿ ಉತ್ಪತ್ತಿಯಾದ ಗಂಧದ ಸಾಲಿಯಾನಾ ಹರಾಜುಗಳು ಈ ಕೆಳಿಗೆ ನಮೂದಾಗುವ ಸ್ಥಳಗಳಲ್ಲಿ ಅವುಗಳ ಪಕ್ಕದಲ್ಲಿ ನಮೂದಿಸಿರುವ ತಾರೀಖುಗಳಲ್ಲಿ ಆಯಾ ಡಿಸ್ಟ್ರಿಕ್ಟ್ ಡೆಪ್ಯೂಟಿ ಕಮ್ಮಿಷನರವರು ಮತ್ತು ಫಾರೆಸ್ಟ್ ಆಫಿಸರುಗಳಿಂದ ನಡಿಸಲ್ಪಡುವುವು.

ಡಿಸ್ಟ್ರಿಕ್ಟ್.	ಕೋಠಿ ಹೆಸರು.	ಹರಾಜು ತಾರೀಖು.
ಮೈಸೂರು	ಹುಣಸೂರು	28ನೇ ನವೆಂಬರ್ 1896.
ಡಿಟೋ	ಶ್ರೀರಂಗಪಟ್ಣ	1ನೇ ಡಿಸೆಂಬರ್ ,,
ಬೆಂಗಳೂರು	ಬೆಂಗಳೂರು	4ನೇ ಡಿಟೋ ,,
ಹಾಸನ	ಹಾಸನ	7ನೇ ಡಿಟೋ ,,
ಕಡೂರು	ಚಿಕ್ಕಮಗಳೂರು	10ನೇ ಡಿಟೋ ,,
ಶಿವಮೊಗ್ಗಾ	ಶಿವಮೊಗ್ಗಾ	15ನೇ ಡಿಟೋ ,,
ಡಿಟೋ	ಸಾಗರ	18ನೇ ಡಿಟೋ ,,
ಡಿಟೋ	ತೀರ್ಥಹಳ್ಳಿ	22ನೇ ಡಿಟೋ ,,

2. ಈ ವರುಷ (i) ಬೆಂಗಳೂರು, ಹಾಸನ, ಕಡೂರು ಮತ್ತು ಶಿವಮೊಗ್ಗಾ ಡಿಸ್ಟ್ರಿಕ್ಟ್ ಕೋಠಿಗಳಲ್ಲಿ ಹಳೇ ತರಹೆ ಪ್ರಕಾರವೂ (ii) ಅಜಮಾಯಿಷಿ ಬಗ್ಯೆ ಮೈಸೂರು ಡಿಸ್ಟ್ರಿಕ್ಟ್ ಕೋಠಿಗಳಲ್ಲಿ ಹೊಸ ಯಾ ಬೊಂಬಾಯಿ ತರಹೆ ಪ್ರಕಾರವೂ ಯರಡು ವಿಧವಾಗಿ ಸಂದೆಲನ್ನ ರಾಸು ಮಾಡಿಸಿರುತ್ತೆ.

3. ಇದುವರಿಗೂ ಜಾರಿಯಲ್ಲಿರುವ ವಜನಿ ಬಟ್ಟುಗಳೇ ಈಗಲೂ ಉಪಯೋಗಿಸಲ್ಪಡುವವು.

4. ಪ್ರತಿ ಕೋಠಿಯಲ್ಲಿಯು ಬಿಕರಿ ಬಗ್ಯೆ ವದಗಿಸಲ್ಪಡುವ ಸಂದೆಲಿನ ತರಹೆಗಳ ವೊತ್ತವನ್ನ ಇದರಡಿ ವಿವರಿಸಿದೆ.